ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 28–08–2018**

# ಪತ್ರಿಕಾ ಆಮಂತ್ರಣ

ಕನ್ನಡ ಪುಸ್ತಕ ಪ್ರಾಧಿಕಾರ ವತಿಯಿಂದ "ಬೆಳ್ಳಿಹಬ್ಬ" ಸಮಾರಂಭ.

**ಉದ್ಘಾಟನೆ:**

ಡಾ. ಜಯಮಾಲ ರಾಮಚಂದ್ರ,
ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು.

**ಮುಖ್ಯ ಅತಿಥಿಗಳು:**

ಎಂ. ವೀರಪ್ಪ ಮೊಯಿಲಿ, ಮಾಜಿ ಮುಖ್ಯ ಮಂತ್ರಿಗಳು

**ಅಧ್ಯಕ್ಷತೆ:**

ಡಾ. ವಸುಂಧರಾ ಭೂಪತಿ, ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ.

ದಿನಾಂಕ: 29–08–2018, ಬುಧವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ
ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

**ಸಂಖ್ಯೆ: 891/991**

## ಪತ್ರಿಕಾ ಪ್ರಕಟಣೆ

## ಇಲಾಖಾ ಪರೀಕ್ಷೆಗಳ ಕನ್ನಡ ಭಾಷಾ ವಿಷಯಕ್ಕೆ ಮೌಖಿಕ ಸಂದರ್ಶನ

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಮೇ/ಜೂನ್ ತಿಂಗಳಲ್ಲಿ ನಡೆಸಿದ 2018 ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳ ಕನ್ನಡ ಭಾಷಾ ವಿಷಯದ ಮೌಖಿಕ ಸಂದರ್ಶನಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳ ನೋಂದಣಿ ಸಂಖ್ಯೆಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in ನಲ್ಲಿ ಪ್ರಕಟಿಸಿದೆ.

ಈ ಅಭ್ಯರ್ಥಿಗಳಿಗೆ ದಿನಾಂಕ: 05-09-2018 ರಂದು ಬೆಂಗಳೂರು, ಕಲಬುರಗಿ, ಮೈಸೂರು, ಶಿವಮೊಗ್ಗ ಹಾಗೂ ದಿನಾಂಕ : 05-09-2018 ಮತ್ತು 06-08-2018 ರಂದು ಬೆಳಗಾವಿ ವಿಭಾಗೀಯ ಕೇಂದ್ರಗಳಲ್ಲಿ ಮೌಖಿಕ ಸಂದರ್ಶನವನ್ನು ನಡೆಸಲಿದ್ದು, ಅರ್ಹ ಅಭ್ಯರ್ಥಿಗಳ ಸಂದರ್ಶನ ಸೂಚನಾ ಪತ್ರಗಳನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಅರ್ಹ ಅಭ್ಯರ್ಥಿಗಳು ತಮ್ಮ ನೋಂದಣಿ ಸಂಖ್ಯೆಗಳನ್ನು ನಮೂದಿಸಿ ಸಂದರ್ಶನ ಸೂಚನಾ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಹಾಗೂ ಅಭ್ಯರ್ಥಿಗಳಿಗೆ ವೈಯಕ್ತಿಕವಾಗಿಯೂ ಕೂಡ ಸಂದರ್ಶನ ಸೂಚನಾ ಪತ್ರಗಳನ್ನು ಸ್ಪೀಡ್ ಪೋಸ್ಟ್ ಮುಖಾಂತರ ರವಾನಿಸಲಾಗಿದೆ.

ಸಂದರ್ಶನದ ಸಮಯದಲ್ಲಿ ಸಂದರ್ಶನ ಸೂಚನಾ ಪತ್ರದ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯ ಲಿಖಿತ ಪರೀಕ್ಷೆಗೆ ಜಾತಿ ಮಾಡಿದ್ದ ಪ್ರವೇಶ ಪತ್ರವನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಪ್ರವೇಶ ಪತ್ರ ಹಾಗೂ ಸೂಚನಾ ಪತ್ರಗಳನ್ನು ಹಾಜರುಪಡಿಸದ ಅಭ್ಯರ್ಥಿಗಳಿಗೆ ಮೌಖಿಕ ಸಂದರ್ಶನಕ್ಕೆ ಅವಕಾಶ ನೀಡುವುದಿಲ್ಲ. ಸೂಚನಾ ಪತ್ರಗಳು ಲಭ್ಯವಾಗದ ಮೌಖಿಕ ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳು ದಿನಾಂಕ: 05-09-2018 ಒಳಗಾಗಿ ಆಯೋಗದ ಕೇಂದ್ರ ಕಚೇರಿಯನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ : 080-30574944/30574945/30574957 ಅನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 892/992**

## ಪ್ರಕೃತಿ ಸ್ನೇಹಿ ಗಣೇಶ ವಿಗ್ರಹ ಪೂಜೆಗೆ ಬಳಸುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕ್ರಮ

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ಪರಿಸರ ಸಂರಕ್ಷಣೆ ದೃಷ್ಟಿಯಿಂದ ಬಣ್ಣವಿಲ್ಲದ ಪ್ರಕೃತಿ ಸ್ನೇಹಿ ಮಣ್ಣಿನ ಗಣೇಶ ವಿಗ್ರಹಗಳನ್ನು ಬರುವ ಗಣೇಶ ಹಬ್ಬದಲ್ಲಿ ಸಾರ್ವಜನಿಕರು ಕೊಂಡುಕೊಳ್ಳುವಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ತಿಳಿಸಿದ್ದಾರೆ.

ಗಣೇಶ ವಿಗ್ರಹಗಳಿಗೆ ಹಚ್ಚಿರುವ ಬಣ್ಣದಲ್ಲಿ ಸೀಸ, ಪಾದರಸ, ಅರ್ಸೆನಿಕ್, ಮೊದಲಾದ ಹಾನಿಕರಾಕ ರಾಸಾಯನಿಕಗಳಿದ್ದು, ಗಣೇಶ ವಿಗ್ರಹಗಳನ್ನು ಪೂಜಿಸಿದ ನಂತರ ಜನರು ನೀರಲ್ಲಿ ವಿಸರ್ಜಿಸಿದಾಗ ಬಣ್ಣದಲ್ಲಿರುವ ಈ ರಾಸಯನಿಕಗಳು ನೀರು, ಹಾಲು, ಮೀನು, ಹುಲ್ಲು ಮೊದಲಾದವುಗಳ ಮೂಲಕ ಪ್ರಾಣಿ ಮತ್ತು ಮನುಷ್ಯರ ಶರೀರ ಸೇರಿ ವಿವಿಧ ರೋಗ–ರುಜಿನಗಳಿಗೆ ಕಾರಣವಾಗುವುದಾಗಿ ಹಾಗೂ ಇದನ್ನು ತಪ್ಪಿಸಲು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಅವಶ್ಯಕವಾಗಿದೆ.

ಬಣ್ಣಬಿಲ್ಲದ ಗಣೇಶ ವಿಗ್ರಹಗಳನ್ನು ಕೊಂಡುಕೊಳ್ಳುವಂತೆ ಶಿಕ್ಷಕರು ಮಕ್ಕಳಲ್ಲಿ ‘ಅರಿವು ಮೂಡಿಸಿದರೆ ಮಕ್ಕಳು ತಮ್ಮ ಪೋಷಕರಿಗೆ ಈ ವಿಚಾರವನ್ನು ತಿಳಿಸಿ ಬಣ್ಣವಿಲ್ಲದ ಗಣೇಶ ವಿಗ್ರಹಗಳನ್ನು ಕೊಂಡುಕೊಳ್ಳಲು ಪ್ರೇರಕವಾಗುವದಲ್ಲದೇ ಪರಿಸರ ಸಂರಕ್ಷಣೆಯೂ ಆಗುತ್ತದೆ.

ಈ ಕುರಿತು ಶಾಲಾ ಮಕ್ಕಳು ಶಿಕ್ಷಕರು ಹೇಳಿದ ಮಾತುಗಳನ್ನು ಪಾಲಿಸುವವರಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲೆಗಳ ಶಿಕ್ಷಕರಿಗೆ ಮಾಹಿತಿ ನೀಡಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಉಪ ನಿರ್ದೇಶಕರುಗಳಿಗೆ ನಿರ್ದೇಶನ ನೀಡುವುದು ಅತ್ಯಾವಶ್ಯಕವಾಗಿರುವ ಹಿನ್ನಲೆಯಲ್ಲಿ ಸರ್ಕಾರ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರಿಗೆ ಸೂಕ್ತಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ: 893/993**

## ಹದಿನಾಲ್ಕು ವಾರದ ಬೇಕರಿ ಟೆಕ್ನಾಲಜಿ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಇವರಿಂದ ಹದಿನಾಲ್ಕು ವಾರದ ಬೇಕರಿ ಟೆಕ್ನಾಲಜಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. (ಹತ್ತನೇ ತರಗತಿ) ಪಾಸಾಗಿರಬೇಕು. ನಿಗಧಿತ ಅರ್ಜಿ ಪಾರಂಗಳನ್ನು ರೂ. 10/– ಸಂದಾಯಿಸಿ, ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024, ಇಲ್ಲಿಂದ ಪಡೆದುಕೊಳ್ಳಬಹುದು.

ಅರ್ಜಿಯನ್ನು ಪಡೆಯಲು ಹಾಗೂ ಭರ್ತಿಮಾಡಿದ ಹಿಂದಿರುಗಿಸಲು ಆಗಸ್ಟ್ 31 ರ ಸಂಜೆ 4.00 ಗಂಟೆಯೊಳಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024, ಈ ವಿಳಾಸಕ್ಕೆ ತಲುಪಿಸಬೇಕು.

ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080–23513370 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 894/994**

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉರ್ದು ಭಾಷಾ ಉಪನ್ಯಾಸಕರು, ಮತ್ತು ಇಂಗ್ಲೀಷ್ ಭಾಷಾ ಉಪನ್ಯಾಸಕರು ಹಾಗೂ ಆಯುಷ್ ಇಲಾಖೆಯಲ್ಲಿನ ಅಯುಷ್ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರು (ಆಯುರ್ವೇದ) ಕ್ರಿಯಾ ಶರೀರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿನಾಂಕ: 24–08–2018 ರಂದು ಆಯೋಗದ ಅಂತರ್ಜಾಲ "http://kpsc.kar.nic.in/Selection Lists" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ಆಯ್ಕೆಪಟ್ಟಿಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ದಿನಾಂಕ: 30–8–2018 ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದೆಂದು ಹಾಗೂ ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 895/995**

# ಎಸಿಬಿ ದಾಳಿ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕು ಯಲವಳ್ಳಿ ಗ್ರಾಮದ ನಿವಾಸಿಯು ತಮ್ಮ ಜಮೀನಿಗೆ ಸಂಬಂಧಪಟ್ಟ ಸರ್ವೆ ದಾಖಲಾತಿಗಳ ದೃಡೀಕೃತ ಪ್ರತಿಗಳನ್ನು ಕೋರಿ ಕೋಲಾರ ತಾಲ್ಲೂಕು ಕಛೇರಿಯಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಶ್ರೀ.ವೆಂಕಟೇಶಪ್ಪ, ಡಿ ಗ್ರೂಪ್ ನೌಕರ, ಎಡಿಎಲ್‌ಆರ್ ಕಛೇರಿ, ಕೋಲಾರ ರವರು ಸರ್ವೆ ದಾಖಲಾತಿಗಳ ದೃಡೀಕೃತ ಪ್ರತಿಗಳನ್ನು ನೀಡಲು ರೂ.2,000/– ಲಂಚಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ: 28.08.2018 ರಂದು ಶ್ರೀ.ವೆಂಕಟೇಶಪ್ಪ, ಡಿ ಗ್ರೂಪ್ ನೌಕರ, ಎಡಿಎಲ್‌ಆರ್ ಕಛೇರಿ, ಕೋಲಾರ ರವರು ಲಂಚದ ಹಣ ರೂ.2,000/–ಗಳನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಕೋಲಾರ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 896/996**

# ACB Raid

Bengaluru August 28 (Karnataka Information)

A resident of Yellavalli village, Maluru taluk Kolar district had sought for certified copies of land records at Kolar Taluk office. Sri.Venkateshappa, D group employee, ADLR office, Kolar had demanded a bribe of Rs.2,000/- to issue the same.

On 28.08.2018 the Officials of ACB PS Kolar have trapped and arrested Sri.Venkateshappa, D group employee while receiving bribe amount of Rs.2,000/- from the complainant. The bribe amount has been seized. The case is under investigation says official press release.

**ಸಂಖ್ಯೆ: 897/997**

# ತಾತ್ಕಾಲಿಕ ಆಯ್ಕೆ ಪಟ್ಟಿ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಕರ್ನಾಟಕ ಲೋಕಸೇವಾ ಆಯೋಗವು 2016 ನೇ ಸಾಲಿನ ರಾಜ್ಯ ಸಿವಿಲ್ ಸೇವೆಗಳಡಿಯ ವಿವಿಧ ಇಲಾಖೆಗಳಲ್ಲಿನ 389 (ಉ.ಮೂ.ವೃ. 315 +75 ಹೈ.ಕ.) ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳನ್ನು ಆಯ್ಕೆಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯ ಅಧಿಸೂಚನೆಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.inLists-Provisional selection list ರಡಿಯಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಯ ಕುರಿತಂತೆ ಆಕ್ಷೇಪಣೆಗಳೇನದರೂ ಇದ್ದಲ್ಲಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 07 ದಿವಸಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು –1 ಇವರಿಗೆ ಲಿಖಿತ ಮೂಲಕ ಸಲ್ಲಿಸಲು ಸೂಚಿಸಲು ಆಯೋಗದ ಪ್ರಕಟಣೆ ತಿಳಿಸಿದೆ.